ಆರೋಗ್ಯ ಕೇಂದ್ರಗಳು ಹಾಗು ಆಸ್ಪತ್ರೆಗಳು ಇರುತ್ತವೆ?

2. ಸದರಿ ಆಸ್ಪತ್ರೆಗಳಲ್ಲಿ ಮಂಜೂರಾದ ವೈದ್ಯಾಧಿಕಾರಿಗಳ ಹಾಗೂ ವೈದ್ಯಕೀಯೇತರ ಹುದ್ದೆಗಳು ಎಷ್ಟು?

3. ಕೆಲವು ವರ್ಷಗಳಿಂದ ಈ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

4. ಆ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

1. ಎರಡು ಸಮುದಾಯ ಆರೋಗ್ಯ ಕೇಂದ್ರ ಹಾಗೂ ಒಂಬತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇರುತ್ತವೆ.

2. 16 ವೈದ್ಯಾಧಿಕಾರಿಗಳು ಮತ್ತು 39 ವೈದ್ಯಕೀಯೇತರ ಹುದ್ದೆಗಳು ಇರುತ್ತವೆ.

3. ವೈದ್ಯರ ಹುದ್ದೆ ಭರ್ತಿ ಮಾಡಿದೆ.

4. ಬಾದಾಮಿ ತಾಲ್ಲೂಕಿನಲ್ಲಿ ಎಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ವಿಷಯ:- ಬಾದಾಮಿ ತಾಲ್ಲೂಕಿನ ಹಲಕುರ್ಕಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 123 (485)

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ಬಾದಾಮಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ 1996-97ನೇ ಸಾಲಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಮಂಜೂರಾತಿಯನ್ನು ನೀಡಲು ಉದ್ದೇಶಿಸಿದ್ದಾರೆ.

ಆ) ಬಾದಾಮಿ ತಾಲ್ಲೂಕಿನ ಹಲಕುರ್ಕಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ ಮಾಡಲು ಸರ್ಕಾರದವರು ಕ್ರಮ ಕೈಗೊಂಡಿದ್ದಾರೆಯೇ?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಇನ್ನೂ ತೀರ್ಮಾನಿಸಿಲ್ಲ.

ಆ) ಸದ್ಯಕ್ಕೆ ಇಲ್ಲ.

ವಿಷಯ:- ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಸಂದರ್ಶಕರ ಸಮಿತಿ ರಚನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 124 (267)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ):- ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಸಂದರ್ಶಕ ಸಮಿತಿಗಳನ್ನು ರಚಿಸಲಾಗುವುದೇ?

ಆ) ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಸಂದರ್ಶಕ ಸಮಿತಿಯನ್ನು ರಚಿಸದಿರಲು ಕಾರಣಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟಂಬ ಕಲ್ಯಾಣ ಸಚಿವರು):-

ಅ) ಹೌದು.

ಆ) ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಸಂದರ್ಶಕ ಸಮಿತಿಯನ್ನು ರಚಿಸಲಾಗುತ್ತಿದೆ.

ವಿಷಯ:- ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಅಭಿವೃದ್ಧಿ ಕೆಲಸಗಳು ಸ್ಥಗಿತಗೊಂಡಿರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 125 (266)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ):- ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಅಭಿವೃದ್ಧಿಗೆ ಸರ್ಕಾರದವರು ಯೋಜಿಸಿರುವ ಒಟ್ಟು ಹಣ ಎಷ್ಟು?

ಆ) ಅಭಿವೃದ್ಧಿ ಸ್ಥಗಿತಗೊಂಡಿರುವುದಕ್ಕೆ ಕಾರಣವೇನು? ಪೂರ್ಣ ಕೆಲಸವನ್ನು ಯಾವಾಗ ಮುಗಿಸಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟಂಬ ಕಲ್ಯಾಣ ಸಚಿವರು):-

ಅ) ಒಟ್ಟು ಅಂದಾಜು ಮೊತ್ತ 18.50 ಕೋಟಿ ರೂಪಾಯಿಗಳು.

ಆ) ಕೆಲಸವು ಪ್ರಗತಿಯಲ್ಲಿದೆ, ಎಂದು ಮುಖ್ಯ ಇಂಜಿನಿಯರು ದಕ್ಷಿಣ ಬೆಂಗಳೂರು, ಇವರು ಪ್ರಗತಿ ವರದಿ ಸಲ್ಲಿಸಿದ್ದು, ಬಾಕಿ ಉಳಿದಿರುವ ಕಟ್ಟಡ ಕಾಮಗಾರಿಗಳನ್ನು ಶೀಘ್ರವಾಗಿ ಮುಗಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ:- ಕಳ್ಳಂಬೆಳ್ಳ ಕ್ಷೇತ್ರದಲ್ಲಿ ಕಿರು ನೀರು ಸರಬರಾಜು ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 126 (208)

ಶ್ರೀ ಟಿ.ಬಿ.ಜಯಚಂದ್ರ (ಕಳ್ಳಂಬೆಳ್ಳ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು